920(1275) ಶ್ರೀ ದೇಸಾಯಿ ಶಿವಪುತ್ರಪ್ಪ ಮಡಿವಾಳಪ್ಪ : ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಆಲಮಟ್ಟಿ ಜಲಾಶಯದಿಂದ ಬಿಜಾಪುರ ಜಿಲ್ಲೆಯ ಕೆರೆಗಳಿಗೆ ನೀರು ತುಂಬುವ ವಿಚಾರ ಸರ್ಕಾರದ ಮುಂದಿದೆಯೇ :

ಆ) ಇಲ್ಲದಿದ್ದಲ್ಲಿ, ಕೆರೆಗಳಿಗೆ ನೀರು ತುಂಬಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

ಶ್ರೀ ಮಲ್ಲಿಕಾರ್ಜುನ ಖರ್ಗೆ(ಜಲ ಸಂಪನ್ಮೂಲ ಮತ್ತು ಸಾರಿಗೆ ಸಚಿವರು) :

ಅ) ಕೆರೆಗಳಿಗೆ ನೀರು ತುಂಬಿಸುವ ಕುರಿತು ಕೃಷ್ಣಾ ಮೇಲ್ದಂಡೆ ಯೋಜನೆಯಲ್ಲಿ ಯಾವುದೇ ಅವಕಾಶ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

924(1355) ಶ್ರೀ ಕೆ.ಎಸ್.ಈಶ್ವರಪ್ಪ(ಶಿವಮೊಗ್ಗ) : ಮಾನ್ಯ ಪೌರಾಡಳಿತ ಹಾಗೂ ಕೆ.ಯು.ಐ.ಡಿ.ಎಫ್.ಸಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಕರ್ನಾಟಕ ನಗರ ಮೂಲಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ಸಂಸ್ಥೆಯ ಶಿವಮೊಗ್ಗ ನಗರವನ್ನು ಅಭಿವೃದ್ಧಿ ಕಾರ್ಯಕ್ರಮಗಳಡಿಯಲ್ಲಿ ಸೇರ್ಪಡೆಯಾಗಿದೆಯೇ :

ಆ) ಹಾಗಿದ್ದಲ್ಲಿ, ಎಷ್ಟು ಹಣ ಒದಗಿಸಲಾಗುವುದು ?

ಇ) ಯಾವಾಗ ಕಾಮಗಾರಿಗಳನ್ನು ಪ್ರಾರಂಭಿಸಲಾಗುವುದು ?

ಶ್ರೀ ಎಸ್.ಆರ್.ಮೋರೆ (ಪೌರಾಡಳಿತ ಹಾಗೂ ಕೆ.ಯು.ಐ.ಡಿ.ಎಫ್.ಸಿ ಸಚಿವರು) :

ಅ) ಶಿವಮೊಗ್ಗ ನಗರವನ್ನು ಕರ್ನಾಟಕ ಪೌರ ಸಂಸ್ಥೆಗಳ ಸುಧಾರಣಾ ಯೋಜನೆ (ಕೆ.ಎಮ್.ಆರ್.ಪಿ.ಯಡಿಯಲ್ಲಿ ಸೇರಿಸಲಾಗಿದೆ.

ಆ) ಸಾಲ ಅನುದಾನವನ್ನು ಶಿವಮೊಗ್ಗ, ನಗರಸಭೆಯ ಸಾಲ ಮರುಪಾವತಿಯ ಸಾಮರ್ಥ್ಯವನ್ನು ಅನುಸರಿಸಿ ನೀಡಲಾಗುತ್ತದೆ.

ಇ) ಯೋಜನೆಯು ಇನ್ನೂ ನಿಷ್ಕರ್ಷಣೆಯ ಮಟ್ಟದಲ್ಲಿದೆ.

925(1356) ಶ್ರೀ ಕೆ.ಎಸ್. ಈಶ್ವರಪ್ಪ(ಶಿವಮೊಗ್ಗ) : ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದ ನ್ಯಾಯಾಲಯಗಳಲ್ಲಿ ಇತ್ಯರ್ಥವಾಗದೇ ಇರುವ ಮೊಕದ್ದಮೆಗಳು ಎಷ್ಟು (ವರ್ಷವಾರು ಮಾಹಿತಿ ನೀಡುವುದು)

ಆ) ಈ ಮೊಕದ್ದಮೆಗಳನ್ನು ಇತ್ಯರ್ಥಪಡಿಸುವಲ್ಲಿ ಸರ್ಕಾರವು ಕೈಗೊಂಡಿರುವ ಕ್ರಮವೇನು?

ಶ್ರೀ ಹೆಚ್.ಕೆ. ಪಾಟೀಲ್(ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು):

1) ದಿನಾಂಕ 1-1-2003ರ ಅಂತ್ಯಕ್ಕೆ ಇತ್ಯರ್ಥವಾಗದೆ ಉಳಿದಿರುವ ಸಿವಿಲ್ ಮತ್ತು ಕ್ರಿಮಿನಲ್ ಮೊಕದ್ದಮೆಗಳ ಸಂಖ್ಯೆ : 1010420

2) ದಿನಾಂಕ 31-12-2003 ರ ಅಂತ್ಯಕ್ಕೆ ಇತ್ಯರ್ಥವಾಗದೆ ಉಳಿದಿರುವ ಸಿವಿಲ್ ಮತ್ತು ಕ್ರಿಮಿನಲ್ ಮೊಕದ್ದಮೆಗಳ ಸಂಖ್ಯೆ : 1037779